ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಕರ್ನಾಟಕ / ವಿಧಾನ ಸಭೆ

ಪತ್ರಿಕೆಯ ಹೆಸರು : NAME OF THE NEWS PAPER : ವಿಜಯವಾಣಿ

ದಿನಾಂಕ : DATE : 3/12/19

# ಆಸ್ತಿ ವಿವರ ಸಲ್ಲಿಸದ 9 ಶಾಸಕರು

ಬೆಂಗಳೂರು: ಆಸ್ತಿ ವಿವರ ಸಲ್ಲಿಸದೇ ನಿರ್ಲಕ್ಷ್ಯ ತೋರಿರುವ ಅನರ್ಹ ಶಾಸಕ ಎಚ್.ವಿಶ್ವನಾಥ್ ಹಾಗೂ 9 ಶಾಸಕರ ವಿರುದ್ಧ ಕ್ರಮ ಕೈಗೊಳ್ಳುವಂತೆ ರಾಜ್ಯಪಾಲರಿಗೆ ಲೋಕಾಯುಕ್ತ ನ್ಯಾ. ಪಿ.ವಿಶ್ವನಾಥ ಶೆಟ್ಟಿ ವರದಿ ಸಲ್ಲಿಸಿದ್ದಾರೆ. 2018-19ನೇ ಸಾಲಿನ ಆಸ್ತಿ ವಿವರ ಘೋಷಿಸುವಂತೆ ಎಲ್ಲ ಶಾಸಕರಿಗೆ ಲೋಕಾಯುಕ್ತ ಸೂಚಿಸಿತ್ತು. ಜೂನ್ 30ರಿಂದ ಜುಲೈ 1ರೊಳಗೆ ಆಸ್ತಿ ವಿವರ ಸಲ್ಲಿಸುವಂತೆ ಆದೇಶ ಹೊರಡಿಸಿತ್ತು.



ರಾಜ್ಯಪಾಲರಿಗೆ ವರದಿ ಸಲ್ಲಿಸಿದ ಲೋಕಾಯುಕ್ತ

**ಯಾರ್‍ಯಾರು ವಿವರ ಸಲ್ಲಿಸಿಲ್ಲ?:** ಅಫ್ಜಲ್‌ಪುರ ಶಾಸಕ ಎಂ.ವೈ. ಪಾಟೀಲ್, ಸೇಡಂನ ರಾಜಕುಮಾರ್ ಪಾಟೀಲ್, ಕಾರವಾರದ ರೂಪಾಲಿ ಸಂತೋಷ್ ನಾಯ್ಕ, ಹೊನ್ನಾಳಿಯ ಎಂ.ಪಿ. ರೇಣುಕಾಚಾರ್ಯ, ತುಮಕೂರು ನಗರ ಕ್ಷೇತ್ರದ ಜಿ.ಬಿ.ಜ್ಯೋತಿ ಗಣೇಶ್, ಕೆಜಿಎಫ್‌ನ ಎಂ. ರೂಪಕಲಾ, ಬೊಮ್ಮನಹಳ್ಳಿಯ ಎಂ.ಸತೀಶ್ ರೆಡ್ಡಿ, ಮಂಡ್ಯದ ಎಂ. ಶ್ರೀನಿವಾಸ್, ಕೊಳ್ಳೇಗಾಲ ಶಾಸಕ ಎನ್. ಮಹೇಶ್ ಹೆಸರು ವರದಿಯಲ್ಲಿ ಉಲ್ಲೇಖವಾಗಿದೆ. ಹುಣಸೂರಿನ ಅನರ್ಹ ಶಾಸಕ ಎಚ್.ವಿಶ್ವನಾಥ್ ಹೆಸರೂ ಇದೆ.